ಜೆಎಸ್‌ಎಸ್ ಮಹಾವಿದ್ಯಾಪೀಠ

# ಜೆಎಸ್‌ಎಸ್ ಮಹಿಳಾ ಕಾಲೇಜು

ಚಾಮರಾಜನಗರ ವಿಶ್ವವಿದ್ಯಾನಿಲಯಕ್ಕೆ ಸಂಯೋಜಿತ, ನ್ಯಾಕ್‌ನಿಂದ B+ (CGPA: 2.74) ಮಾನ್ಯತೆ ಪಡೆದಿದೆ

**ಕೊಳ್ಳೇಗಾಲ – 571 440 ಚಾಮರಾಜನಗರ ಜಿಲ್ಲೆ**

☎: 08224-252149 jsscwk@gmail.com www. jsscwkgl.org

ದಿ : 31-7-2026

## ಜೆಎಸ್‌ಎಸ್ ಮಹಿಳಾ ಕಾಲೇಜಿನಲ್ಲಿ ಪರಿಚಯಾತ್ಮಕ ಕಾರ್ಯಕ್ರಮ

ಕೊಳ್ಳೇಗಾಲ:30.07.2026 ಕಾಲೇಜು ಜೀವನವು ವಿದ್ಯಾರ್ಥಿಗಳ ವ್ಯಕ್ತಿತ್ವ ವಿಕಸನಕ್ಕೆ ಅತ್ಯಂತ ಮಹತ್ವದ ಹಂತವಾಗಿದ್ದು ಈ ಅವಧಿಯನ್ನು ಶಿಸ್ತು, ಸಮಯಪಾಲನೆ ಮತ್ತು ನಿರಂತರ ಅಧ್ಯಯನದ ಮೂಲಕ ಸದುಪಯೋಗಪಡಿಸಿಕೊಳ್ಳುವಂತೆ ಡಾ.ನಯನ ತಮ್ಮಯ್ಯ, ಮುಖ್ಯಸ್ಥರು, ವಾಣಿಜ್ಯಶಾಸ್ತ್ರ ವಿಭಾಗ, ಕಾವೇರಿ ಕಾಲೇಜು, ಗೋಣಿಕೊಪ್ಪಲುರವರು ತಿಳಿಸಿದರು.

ವಿದ್ಯಾರ್ಥಿಗಳು ಪಠ್ಯಕ್ರಮದ ಜೊತೆ ಕೌಶಲ್ಯಾಭಿವೃದ್ಧಿ, ಸಂವಹನ ಕೌಶಲ್ಯ, ನಾಯಕತ್ವ ಗುಣಗಳು ಹಾಗೂ ತಂಡದಲ್ಲಿ ಕಾರ್ಯನಿರ್ವಹಿಸುವ ಮನೋಭಾವವನ್ನು ಬೆಳೆಸಿಕೊಳ್ಳಬೇಕು ಎಂದು ಸಲಹೆ ನೀಡಿದರು. ಕಾಲೇಜಿನಲ್ಲಿ ಲಭ್ಯವಿರುವ ಗ್ರಂಥಾಲಯ, ಪ್ರಯೋಗಾಲಯ, ಕ್ರೀಡೆ, ಎನ್‌ಎಸ್‌ಎಸ್, ಎನ್‌ಸಿಸಿ ಹಾಗೂ ವಿವಿಧ ಚಟುವಟಿಕೆಗಳಲ್ಲಿ ಸಕ್ರಿಯವಾಗಿ ಭಾಗವಹಿಸುವಂತೆ ಪ್ರೋತ್ಸಾಹಿಸಿದರು. ಉತ್ತಮ ನಡತೆ, ನೈತಿಕ ಮೌಲ್ಯಗಳು, ಸಾಮಾಜಿಕ ಹೊಣೆಗಾರಿಕೆ ಹಾಗು ಪರಿಸರದ ಬಗ್ಗೆ ಕಾಳಜಿ ಹೊಂದಿರುವ ಉತ್ತಮ ನಾಗರಿಕರಾಗಿ ಬೆಳೆಯುವಂತೆ ವಿದ್ಯಾರ್ಥಿಗಳಿಗೆ ಕರೆ ನೀಡಿದರು. ಗುರಿಯನ್ನು ಸ್ಪಷ್ಟವಾಗಿ ನಿಗದಿಪಡಿಸಿ, ಆತ್ಮವಿಶ್ವಾಸ, ಪರಿಶ್ರಮ ಮತ್ತು ಸಕಾರಾತ್ಮಕ ಮನೋಭಾವದಿಂದ ಕಾರ್ಯನಿರ್ವಹಿಸಿದರೆ ಯಶಸ್ಸು ಖಚಿತ ಎಂದು ತಿಳಿಸಿದರು.

ಅಧ್ಯಕ್ಷತೆ ವಹಿಸಿ ಮಾತನಾಡಿದ ಪ್ರಾಚಾರ್ಯರಾದ ಡಾ.ಹೆಚ್ ಎಸ್ ಕೊಂಗಳಪ್ಪರವರು ವಿದ್ಯಾರ್ಥಿಗಳು ತಮ್ಮ ಗುರಿಯನ್ನು ಸ್ಪಷ್ಟವಾಗಿ ನಿರ್ಧರಿಸಿಕೊಂಡು ಆತ್ಮವಿಶ್ವಾಸ, ಪರಿಶ್ರಮ ಹಾಗೂ ಸಕಾರತ್ಮಕ ಮನೋಭಾವದೊಂದಿಗೆ ಮುಂದುವರಿದರೆ ಜೀವನದಲ್ಲಿ ಯಶಸ್ಸು ಸಾಧಿಸಬಹುದು ಕಾಲೇಜಿನ ಶೈಕ್ಷಣಿಕ ಮತ್ತು ಸಾಂಸ್ಕೃತಿಕ ಚಟುವಟಿಕೆಗಳಲ್ಲಿ ಸಕ್ರಿಯವಾಗಿ ಭಾಗವಹಿಸಿ ಉತ್ತಮ ವ್ಯಕ್ತಿತ್ವನ್ನು ಬೆಳೆಸಿಕೊಳ್ಳುವಂತೆ ಕರೆ ನೀಡಿದರು.

ಎಲ್ಲಾ ವಿದ್ಯಾರ್ಥಿಗಳಿಗೂ ಉಜ್ವಲ ಭವಿಷ್ಯವನ್ನು ಹಾರೈಸಿ ಕಾಲೇಜಿನ ಹೆಸರನ್ನು ಎತ್ತಿಹಿಡಿಯುವ ಜವಾಬ್ದಾರಿಯುತ ವಿದ್ಯಾರ್ಥಿಗಳಾಗುವಂತೆ ಪ್ರೇರೇಪಿಸಿದರು.

ಎಲ್ಲಾ ವಿಭಾಗಗಳ ಮುಖ್ಯಸ್ಥರು ತಮ್ಮ ವಿಭಾಗದ ಪರಿಚಯ ಮಾಡಿಕೊಟ್ಟರು

ಕಾರ್ಯಕ್ರಮದಲ್ಲಿ ಐಕ್ಯೂಎಸಿ ಸಂಚಾಲಕರು ಮತ್ತು ಮುಖ್ಯಸ್ಥರು, ಶ್ರೀಮತಿ ಮಮತ ಉಪಸ್ಥಿತರಿದ್ದರು.




ಡಾ.ನಯನ ತಮ್ಮಯ್ಯ, ಮುಖ್ಯಸ್ಥರು, ವಾಣಿಜ್ಯಶಾಸ್ತ್ರ ವಿಭಾಗ, ಕಾವೇರಿ ಕಾಲೇಜು, ಗೋಣಿಕೊಪ್ಪಲು ಪರಿಚಯಾತ್ಮಕ ಕಾರ್ಯಕ್ರಮದಲ್ಲಿ ಮಾತನಾಡುತ್ತಿರುವುದು. ಚಿತ್ರದಲ್ಲಿ ಪ್ರಾಚಾರ್ಯರಾದ ಡಾ.ಹೆಚ್ ಎಸ್ ಕೊಂಗಳಪ್ಪರವರು ಹಾಗೂ ಶ್ರೀಮತಿ ಮಮತ ಎಸ್, ವಾಣಿಜ್ಯಶಾಸ್ತ್ರ ವಿಭಾಗದ ಮುಖ್ಯಸ್ಥರು ಮತ್ತು ಐಕ್ಯೂಎಸಿ ಸಂಚಾಲಕರು



ಕಾರ್ಯಕ್ರಮದಲ್ಲಿ ಭಾಗವಹಿಸಿರುವ ಅಧ್ಯಾಪಕರು ಹಾಗೂ ವಿದ್ಯಾರ್ಥಿನಿಯರು